ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 19/07/2019

# ಶಾಸಕ ಅಪಹರಣದ ವಿರುದ್ಧ ಸಿದ್ದರಾಮಯ್ಯ ದೂರು

**ಬೆಂಗಳೂರು:** ಕಾಗವಾಡ ಶಾಸಕ ಶ್ರೀಮಂತ ಪಾಟೀಲ್ ಅವರನ್ನು ಅಪಹರಿಸಲಾಗಿದೆ ಎಂದು ವಿಧಾನಸೌಧ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದ್ದು, ಪ್ರಕರಣದ ತನಿಖೆಗೆ ಡಿಸಿಪಿ ಶಶಿಕುಮಾರ್ ನೇತೃತ್ವದಲ್ಲಿ ವಿಶೇಷ ತಂಡ ರಚಿಸಲಾಗಿದೆ.

ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಅವರು ನೀಡಿದ ದೂರಿನ ಆಧಾರದಲ್ಲಿ ಎಫ್ಐಆರ್ ದಾಖಲಾಗಿದ್ದು, ತನಿಖಾ ತಂಡ ಪಾಟೀಲ್ ಅವರಿಂದ ಹೇಳಿಕೆ ದಾಖಲಿಸಿಕೊಳ್ಳಲು ಮುಂಬೈಗೆ ತೆರಳಿದೆ. ಬುಧವಾರ ರಾತ್ರಿ ಪಾಟೀಲ್ ಅವರು ಇದ್ದಕ್ಕಿದ್ದಂತೆಯೇ ರೆಸಾರ್ಟ್‌ನಿಂದ



ನಾಪತ್ತೆಯಾಗಿದ್ದರು. ಬಳಿಕ ಗುರುವಾರ ಬೆಳಗ್ಗೆ ಮುಂಬೈನ ಆಸ್ಪತ್ರೆಯಲ್ಲಿ ಪತ್ತೆಯಾಗಿದ್ದರು.

**ಸ್ಪೀಕರ್‌ಗೆ ಕೊಟ್ಟ ದೂರು:** ಶ್ರೀಮಂತ ಪಾಟೀಲ್ ಅವರು ನಾಪತ್ತೆಯಾಗಿ ಮುಂಬೈ ಆಸ್ಪತ್ರೆಯಲ್ಲಿ ಇಸಿಜಿ ತಪಾಸಣೆಗೆ ಒಳಗಾಗಿ ಮಲಗಿರುವ ಫೋಟೊ ಬಹಿರಂಗಗೊಳ್ಳುತ್ತಿದ್ದಂತೆಯೇ ಸಿದ್ದರಾಮಯ್ಯ ಅವರು ವಿಧಾನಸಭಾಧ್ಯಕ್ಷ ರಮೇಶ್‌ಕುಮಾರ್ ಅವರಿಗೆ ದೂರು ನೀಡಿದ್ದರು. ದೂರಿನ ಪರಿಶೀಲನೆ ನಡೆಸಿದ ಅವರು ಬಳಿಕ ಗೃಹ ಇಲಾಖೆಗೆ ರವಾನಿಸಿದ್ದರು. ಗೃಹ ಇಲಾಖೆ ದೂರನ್ನು ಡಿಜಿ-ಐಜಿಪಿ ನೀಲಮಣಿ ಎನ್. ರಾಜು ಅವರಿಗೆ ರವಾನಿಸಿತ್ತು. ಆ ಮೂಲಕ ನಗರ ಪೊಲೀಸ್ ಕಮಿಷನರ್ ಅಲೋಕ್‌ಕುಮಾರ್ ಅವರನ್ನು ತಲುಪಿತ್ತು. ಡಿಜಿ ಹಾಗೂ ಕಮಿಷನರ್ ಸೂಚನೆ ಮೇರೆಗೆ ವಿಧಾನಸೌಧ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದ್ದು ತನಿಖೆ ಆರಂಭಗೊಂಡಿದೆ.

ಡಿಸಿಪಿ ಶಶಿಕುಮಾರ್ ನೇತೃತ್ವದಲ್ಲಿ ಪ್ರಕರಣದ ತನಿಖೆಗೆ ವಿಶೇಷ ತಂಡ ರಚಿಸಲಾಗಿದ್ದು, ಈ ತಂಡ ಮುಂಬೈ ಆಸ್ಪತ್ರೆಗೆ ತೆರಳಿ ಪಾಟೀಲ್ ಅವರ ಹೇಳಿಕೆ ದಾಖಲಿಸಿಕೊಳ್ಳಲಿದೆ.